# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | **06** |
| **ಸದಸ್ಯರ ಹೆಸರು** | : | **ಡಾ: ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು)** |
| **ಉತ್ತರಿಸಬೇಕಾದ ದಿನಾಂಕ** | : | **09.12.2024** |
| **ಉತ್ತರಿಸುವ ಸಚಿವರು** | : | **ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು** |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಶೌಚಾಲಯ ಸ್ವಚ್ಛತೆಗೆ ಮತ್ತು ಶಾಲೆಗಳ ಶುಚಿಗೆ ಪ್ರತಿ ವರ್ಷ ಕೊಡುತ್ತಿರುವ ಅನುದಾನವೆಷ್ಟು;(ಐದು ವರ್ಷಗಳ ವಿವರ ನೀಡುವುದು)</td><td>ರಾಜ್ಯವಲಯ ಯೋಜನೆಯಡಿ ರಾಜ್ಯದ ಎಲ್ಲಾ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಕುಡಿಯುವ ನೀರಿನ ನಿರ್ವಹಣೆಯನ್ನೂ ಒಳಗೊಂಡಂತೆ, ಶೌಚಾಲಯ ನಿರ್ವಹಣೆಗೆ ಕಳೆದ 5 ವರ್ಷಗಳಲ್ಲಿ ಈ ಕೆಳಕಂಡಂತೆ ಅನುದಾನ ಬಿಡುಗಡೆಗೊಳಿಸಲಾಗಿರುತ್ತದೆ.
<table>
<tr><th>ವರ್ಷ</th><th>ಮಂಜೂರಾದ ಅನುದಾನ (ರೂ.ಲಕ್ಷಗಳಲ್ಲಿ)</th><th>ಬಿಡುಗಡೆಯಾದ ಅನುದಾನ (ರೂ.ಲಕ್ಷಗಳಲ್ಲಿ)</th></tr>
<tr><td>2019-20</td><td>2499.98</td><td>2499.98</td></tr>
<tr><td>2020-21</td><td>2999.80</td><td>2999.80</td></tr>
<tr><td>2021-22</td><td>2500.00</td><td>2500.00</td></tr>
<tr><td>2022-23</td><td>3500.00</td><td>3500.00</td></tr>
<tr><td>2023-24</td><td>12000.33</td><td>7122.16</td></tr>
<tr><td>2024-25</td><td>5798.32</td><td>4420.09</td></tr>
<tr><td>ಒಟ್ಟು</td><td>29298.43</td><td>23042.03</td></tr>
</table>
ಸಮಗ್ರ ಶಿಕ್ಷಣ ಕರ್ನಾಟಕ ವತಿಯಿಂದ ಸರ್ಕಾರಿ ಶಾಲೆಗಳ ನಿರ್ವಹಣೆಗೆ ಮಕ್ಕಳ ದಾಖಲಾತಿಗೆ ಅನುಗುಣವಾಗಿ ಶಾಲಾನುದಾನ ಕಾರ್ಯಕ್ರಮದಡಿ ಈ ಕೆಳಕಂಡಂತೆ ಶಾಲಾನುದಾನ ಬಿಡುಗಡೆಗೊಳಿಸಲಾಗುತ್ತಿದೆ.
<table>
<tr><th>ಕ್ರ. ಸಂ</th><th>ವಿದ್ಯಾರ್ಥಿಗಳ ಸಂಖ್ಯೆ</th><th>ಘಟಕ ವೆಚ್ಚ(ರೂ. ಗಳಲ್ಲಿ)</th></tr>
<tr><td>1</td><td>1 ರಿಂದ 30 ವಿದ್ಯಾರ್ಥಿಗಳಿರುವ ಶಾಲೆಗಳು</td><td>10,000/-</td></tr>
<tr><td>2</td><td>31 ರಿಂದ 100 ವಿದ್ಯಾರ್ಥಿಗಳಿರುವ ಶಾಲೆಗಳು</td><td>25,000/-</td></tr>
<tr><td>3</td><td>101 ರಿಂದ 250 ವಿದ್ಯಾರ್ಥಿಗಳಿರುವ ಶಾಲೆಗಳು</td><td>50,000/-</td></tr>
<tr><td>4</td><td>251 ರಿಂದ 1000 ವಿದ್ಯಾರ್ಥಿಗಳಿರುವ ಶಾಲೆಗಳು</td><td>75,000/-</td></tr>
<tr><td>5</td><td>1000 ಕ್ಕಿಂತ ಹೆಚ್ಚು ವಿದ್ಯಾರ್ಥಿಗಳಿರುವ ಶಾಲೆಗಳು</td><td>1,00,000/-</td></tr>
</table>
ಅನುದಾನದ ಲಭ್ಯತೆಯನುಸಾರ ಪ್ರತಿ ವರ್ಷ ಶಾಲಾನುದಾನ ಬಿಡುಗಡೆಗೊಳಿಸಲಾಗುತ್ತಿದೆ. ಬಿಡುಗಡೆ ಮಾಡಲಾದ ಶಾಲಾನುದಾನದಲ್ಲಿ ಶೇಕಡಾ 10% ರಷ್ಟು ಅನುದಾನವನ್ನು ಶಾಲಾ ಸ್ವಚ್ಛತೆಗೆ ಬಳಸಲು ನಿಗದಿಪಡಿಸಲಾಗಿದೆ.</td></tr>
<tr><td>ಆ)</td><td>ಸರ್ಕಾರವು ಕೊಡುವ ಅನುದಾನ ಸಾಕಾಗದ</td><td>ರಾಜ್ಯದ ಎಲ್ಲಾ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ</td></tr>
</table>

| | | |
|---|---|---|
| | ಕಾರಣ ಓದುತ್ತಿರುವ ಮಕ್ಕಳಿಂದ/ ವಿದ್ಯಾರ್ಥಿಗಳಿಂದ ಶೌಚಾಲಯ ಸ್ವಚ್ಛತೆ ಮತ್ತು ಶಾಲೆಗಳ ಶುಚಿ ಕಾರ್ಯಕ್ಕೆ ಬಳಸುತ್ತಿರುವುದು ನಿಜವೇ; | ಶಾಲೆಗಳಲ್ಲಿ ಶೌಚಾಲಯಗಳ ಸ್ವಚ್ಛತಾ ಕಾರ್ಯ ಮತ್ತು ನಿರ್ವಹಣೆಯನ್ನು ಯಾವುದೇ ಕಾರಣಕ್ಕೂ ಯಾವುದೇ ಸಂದರ್ಭದಲ್ಲಿಯೂ ಸಹ ವಿದ್ಯಾರ್ಥಿಗಳಿಂದ ಕೈಗೊಳ್ಳುವುದನ್ನು ಕಡ್ಡಾಯವಾಗಿ ನಿಷೇಧಿಸಲಾಗಿದೆ (ಸುತ್ತೋಲೆ ಪ್ರತಿಯನ್ನು **ಅನುಬಂಧ** ದಲ್ಲಿ ಲಗತ್ತಿಸಿದೆ) |
| ಇ) | ಸರ್ಕಾರಿ ಶಾಲೆಗಳನ್ನು ಸ್ಥಳೀಯ ಸಂಸ್ಥೆಗಳಾದ ಪಾಲಿಕೆಗಳು/ಪಟ್ಟಣ ಪಂಚಾಯತಿಗಳು/ ಗ್ರಾಮ ಪಂಚಾಯತಿಗಳಿಗೆ ನಿರ್ವಹಣಾ ಜವಾಬ್ದಾರಿ ವಹಿಸಿ, ಶಾಲೆಗಳನ್ನು ಸ್ವಚ್ಛವಾಗಿಟ್ಟುಕೊಳ್ಳಲು ಸರ್ಕಾರವು ನಿರ್ಧಾರ ಕೈಗೊಳ್ಳುವುದೇ; | ಶಾಲೆಗಳ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ (ಎಸ್.ಡಿ.ಎಂ.ಸಿ)ಗಳ ಸಹಕಾರದೊಂದಿಗೆ ಸ್ಥಳೀಯವಾಗಿ ಲಭ್ಯವಿರುವ ಸಂಪನ್ಮೂಲಗಳನ್ನು ಬಳಸಿಕೊಂಡು ಶೌಚಾಲಯ ಸ್ವಚ್ಛತಾ ಕಾರ್ಯ ಕೈಗೊಳ್ಳಲು ತಿಳಿಸಲಾಗಿದೆ. |
| ಈ) | ಒಂದು ಕಡೆ ಸ್ವಚ್ಛತೆ ಇಲ್ಲದಿದ್ದರೆ ಮಕ್ಕಳ ಆರೋಗ್ಯ ಸಮಸ್ಯೆ, ಇನ್ನೊಂದು ಕಡೆ ಸ್ವಚ್ಛತೆ ಅನುದಾನದ ಕೊರತೆಯಿಂದ ಸರ್ಕಾರಿ ಶಾಲೆಗಳಿಗೆ ತೊಂದರೆಯಾಗುತ್ತಿದ್ದು, ಇದಕ್ಕೆ ಕೈಗೊಂಡಿರುವ ಕ್ರಮಗಳಾವುವು; | 2019-20ನೇ ಸಾಲಿನಿಂದ 2024-25ನೇ ಸಾಲಿನವರೆಗೆ ರಾಜ್ಯದ ಎಲ್ಲಾ ಸರ್ಕಾರಿ ಶಾಲೆಗಳ ಸ್ವಚ್ಛತೆಯನ್ನು ಕಾಪಾಡಿಕೊಳ್ಳಲು ಹಾಗೂ ನಿರ್ವಹಣೆಗೆ ಒಟ್ಟು ರೂ.29298.43 ಲಕ್ಷಗಳು ಮಂಜೂರಾಗಿದ್ದು, ರೂ.23042.03ಲಕ್ಷಗಳನ್ನು ಬಿಡುಗಡೆಗೊಳಿಸಲಾಗಿರುತ್ತದೆ. |
| ಉ) | ಸ್ವಚ್ಛತಾ ಅನುದಾನವನ್ನು ಹೆಚ್ಚಿಸಿ ಈಗಾಗುತ್ತಿರುವ ಸಮಸ್ಯೆಗಳನ್ನು ನಿವಾರಿಸಲು ಸರ್ಕಾರ ತಕ್ಷಣವೇ ಕ್ರಮಗಳನ್ನು ಕೈಗೊಳ್ಳುವುದೇ? | ಶೌಚಾಲಯ ಸ್ವಚ್ಛತೆಯನ್ನು ಮೂಲ ಗುರಿಯನ್ನಾಗಿರಿಸಿಕೊಂಡು ಆಯವ್ಯಯದಲ್ಲಿ ಒದಗಿಸಲಾದ ಅನುದಾನದ ಲಭ್ಯತೆ ಆಧರಿಸಿ ಸ್ವಚ್ಛತಾ ಅನುದಾನವನ್ನು ಹೆಚ್ಚಿಸಲು ಕ್ರಮವಹಿಸಲಾಗುತ್ತದೆ. |

**ಇಪಿ 328 ಯೋಸಕ 2024**

**(ಎಸ್.ಮಧುಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ**
**ಸಚಿವರು**

